**Akashvani : Bangalore**
**Regional Bulletin In Kannada**
**23.05.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**23.05.2026 / 18.40 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ರಾಜ್ಯದಲ್ಲಿ ಕಾರ್ಮಿಕರ ಕನಿಷ್ಠ ವೇತನ ಶೇಕಡ ೬೦ರಷ್ಟು ಏರಿಕೆ ಮಾಡಿ ಸರ್ಕಾರ ಅಧಿಸೂಚನೆ

೨. ಬೆಂಗಳೂರಿನ ಸೂರ್ಯನಗರದಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ

೩. ಎಬೋಲಾ ಆತಂಕ ಹಿನ್ನೆಲೆ ; ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಪ್ರಕಟ

೪. ರೋಜ್‌ಗಾರ್ ಮೇಳ ; ಹುಬ್ಬಳ್ಳಿಯಲ್ಲಿ ೧೫೦ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೫. ಪೆಟ್ರೋಲಿಯಂ ಉತ್ಪನ್ನಗಳ ಮೇಲಿನ ತೆರಿಗೆ ಕಡಿತಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ಬಿಜೆಪಿ ಸಲಹೆ

**<><*<><>*><>**

ಕಾರ್ಮಿಕರ ಕನಿಷ್ಠ ವೇತನವನ್ನು ಶೇಕಡ ೬೦ರಷ್ಟು ಏರಿಕೆ ಮಾಡಿ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಈ ಮೂಲಕ ನಾಡಿನ ಶ್ರಮಿಕರ ಬಹುವರ್ಷಗಳ ಬೇಡಿಕೆಯನ್ನು ಈಡೇರಿಸಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ. ಕಾರ್ಮಿಕರ ಕನಿಷ್ಠ ವೇತನದಿಂದ ರಾಜ್ಯದ ಒಂದು ಕೋಟಿಗೂ ಹೆಚ್ಚು ಕಾರ್ಮಿಕರಿಗೆ ಪ್ರಯೋಜನ ಸಿಗಲಿದೆ. ಈ ಅಧಿಸೂಚನೆಯು ರಾಜ್ಯದ ಅಸಂಘಟಿತ ವಲಯ ಹಾಗೂ ನಿರ್ದಿಷ್ಟ ವಲಯಗಳ ಕಾರ್ಮಿಕರಿಗೆ ಆರ್ಥಿಕ ಭದ್ರತೆ ಒದಗಿಸಲಿದೆ. ಕನಿಷ್ಠ ವೇತನ ನಿರ್ಧರಿಸುವಾಗ ಸುಪ್ರೀಂಕೋರ್ಟ್ ನ್ಯಾಯಪೀಠದ ನಿರ್ದೇಶನವನ್ನು ಪಾಲಿಸಿ ಪರಿಷ್ಕರಣೆ ಮಾಡಲಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ. ಈ ಮೊದಲಿದ್ದ ನಾಲ್ಕು ವಲಯಗಳ ವರ್ಗೀಕರಣದ ಬದಲಾಗಿ ಇದೇ ಮೊದಲ ಬಾರಿಗೆ ಎಲ್ಲಾ ನಿಗದಿತ ಉದ್ಯೋಗಗಳನ್ನು ಒಂದೇ ಅಧಿಸೂಚನೆಯಡಿ ತರಲಾಗಿದೆ.

**<><*<><>*><>**

ಸೂರ್ಯನಗರದಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಮುಂದಾಗುವ ಮೂಲಕ ಕ್ರೀಡೆ, ಪ್ರವಾಸೋದ್ಯಮ, ಉದ್ಯೋಗ ಸೃಷ್ಟಿ, ಆರ್ಥಿಕ ಬೆಳವಣಿಗೆ ಸೇರಿದಂತೆ ಈ ಭಾಗದ ಸಮಗ್ರ ಅಭಿವೃದ್ಧಿಗೆ ಮುಂದಡಿ ಇಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಅವರು ಇಂದು, ವಸತಿ ಇಲಾಖೆ, ಕರ್ನಾಟಕ ಗೃಹ ಮಂಡಳಿ ಜಂಟಿಯಾಗಿ ಬೆಂಗಳೂರಿನ

ಸೂರ್ಯಗ್ರಾಮದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ಶಂಕುಸ್ಥಾಪನೆ, ಮುಖ್ಯಮಂತ್ರಿಗಳ "ನಮ್ಮ ಮನೆ" ಯೋಜನೆಗೆ ಚಾಲನೆ, ಸೂರ್ಯಶೈನ್, ಸೂರ್ಯ ಡಿವೈನ್ ವಸತಿ ಸಮುಚ್ಚಯ ಕಾಮಗಾರಿಗಳ ಶಂಕುಸ್ಥಾಪನೆ, ವಸತಿ ಯೋಜನೆಗೆ ಭೂಮಿ ನೀಡಿದ ಭೂ ಮಾಲೀಕರಿಗೆ ಸಾಂಕೇತಿಕ ನಿವೇಶನ ಹಂಚಿಕೆ ಕಾರ್ಯಕ್ರಮ ಉದ್ಘಾಟಿಸಿದರು. ಇಲ್ಲಿಯವರೆಗೂ ಕೇವಲ ವಸತಿ ನಿರ್ಮಾಣ ಮಾಡುತ್ತಿದ್ದ ವಸತಿ ಇಲಾಖೆ ಮತ್ತು ಕೆಹೆಚ್‌ಬಿ ಈಗ ೮೦ ಸಾವಿರ ಆಸನ ವ್ಯವಸ್ಥೆಯ ಕ್ರೀಡಾಂಗಣ ನಿರ್ಮಾಣಕ್ಕೆ ಮುಂದಾಗಿರುವುದು ಪ್ರಗತಿಯ ದೂರದೃಷ್ಟಿಯಾಗಿದೆ. ಇದು ದೇಶದ ಎರಡನೇ ದೊಡ್ಡ ಕ್ರೀಡಾಂಗಣವಾಗಿದೆ ಎಂದು ಅವರು ತಿಳಿಸಿದ್ದಾರೆ.

**ಧ್ವನಿ : ಸಿದ್ದರಾಮಯ್ಯ ( ೩೦ ಸೆಕೆಂಡ್ಸ್)**

ಈ ಭಾಗದ ಅಭಿವೃದ್ಧಿಗೆ ಪೂರಕವಾಗಿ ಜಿಗಣಿ ಹೋಬಳಿಯ ಪ್ರಮುಖ ಸಂಪರ್ಕ ರಸ್ತೆ ನಿರ್ಮಾಣಕ್ಕೂ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಜಿ.ಪರಮೇಶ್ವರ್, ವಸತಿ ಸಚಿವ ಜಮೀರ್ ಅಹಮದ್, ಕೆಹೆಚ್‌ಬಿ ಅಧ್ಯಕ್ಷ ಶಾಸಕ ಶಿವಲಿಂಗೇಗೌಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**<><*<><>*><>**

ವಿಶ್ವದಾದ್ಯಂತ ಇದೀಗ ಎಬೋಲಾ ಆತಂಕ ಎದುರಾಗಿದ್ದು, ಆರೋಗ್ಯ ಇಲಾಖೆ ಮಾರ್ಗಸೂಚಿ ಪ್ರಕಟಿಸಿದೆ. ಕೇಂದ್ರ ಸರ್ಕಾರದ ಸೂಚನೆಯ ಮೇರೆಗೆ ಆರೋಗ್ಯ ಇಲಾಖೆ ಮುಂಜಾಗ್ರತಾ ಕ್ರಮಗಳನ್ನು ಬಿಡುಗಡೆ ಮಾಡಿದೆ. ಎಬೋಲಾ ನಿಯಂತ್ರಣಕ್ಕೆ ಮಾರ್ಗಸೂಚಿ ಜೊತೆಗೆ ಪಾಸಿಟಿವ್ ಕಂಡು ಬಂದ ವ್ಯಕ್ತಿಗಳಿಗೆ ಚಿಕಿತ್ಸೆ ನೀಡಲು ಬೆಂಗಳೂರಿನ ರಾಜೀವ್ ಗಾಂಧಿ, ಮಂಗಳೂರಿನ ವೆನ್ಲಾಕ್ ಆಸ್ಪತ್ರೆಗಳನ್ನು ಗುರುತು ಮಾಡಲಾಗಿದೆ. ಸಾರ್ವಜನಿಕರು ವದಂತಿಗೆ ಕಿವಿಗೊಡದೆ ಆತಂಕಕ್ಕೆ ಒಳಗಾಗದಂತೆ ಆರೋಗ್ಯ ಇಲಾಖೆ ಮನವಿ ಮಾಡಿದೆ. ಸರ್ಕಾರ ಎಲ್ಲಾ ರೀತಿಯ ಮುಂಜಾಗ್ರತೆ ವಹಿಸಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಕೇಂದ್ರ ಸರ್ಕಾರ ಪಾರದರ್ಶಕ ಹಾಗೂ ಭ್ರಷ್ಟಾಚಾರ ರಹಿತ ನೇಮಕಾತಿ ಪ್ರಕ್ರಿಯೆಗೆ ಆದ್ಯತೆ ನೀಡುತ್ತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ರೋಜ್‌ಗಾರ್ ಮೇಳದಲ್ಲಿ ೧೫೦ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡಿದ ಅವರು, ದೇಶದಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಲಾಗಿದೆ ಎಂದು ಹೇಳಿದ್ದಾರೆ. ಇಂದು ನೇಮಕಗೊಂಡ ಅಭ್ಯರ್ಥಿಗಳು ಸಾರ್ವಜನಿಕ ಸೇವೆಯಲ್ಲಿ ನಿಷ್ಠ, ಪ್ರಾಮಾಣಿಕತೆ ಹಾಗೂ ಸಮರ್ಥನಾ ಭಾವದಿಂದ ಕಾರ್ಯ ನಿರ್ವಹಿಸಬೇಕು ಎಂದು ಕರೆ ನೀಡಿದ್ದಾರೆ.

**ಧ್ವನಿ : ಪ್ರಲ್ಹಾದ್ ಜೋಶಿ ( ೩೦ ಸೆಕೆಂಡ್ಸ್)**

**<><*<><>*><>**

ಎಲ್ಲರಿಗೂ ಸಮಾನತೆ ಹಾಗೂ ಗುಣಮಟ್ಟದ ಶಿಕ್ಷಣ ನೀಡುವುದು ರಾಜ್ಯ ಸರ್ಕಾರದ ಪ್ರಮುಖ ಕರ್ತವ್ಯವಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ ಮೈಸೂರಿನಲ್ಲಿ ತಿಳಿಸಿದ್ದಾರೆ. ಮೈಸೂರಿನ ಕುವೆಂಪುನಗರದಲ್ಲಿರುವ ಹಿರಿಯ ಸಾಹಿತಿ ದೇವನೂರು ಮಹಾದೇವ ಅವರ

ನಿವಾಸಕ್ಕೆ ಭೇಟಿ ನೀಡಿದ ಸಚಿವರು, ಶಿಕ್ಷಣ ವ್ಯವಸ್ಥೆಯ ಸುಧಾರಣೆ ಕುರಿತು ಸುದೀರ್ಘ ಚರ್ಚೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿಕ್ಷಣ ಇಲಾಖೆಯಲ್ಲಿ ತಂದಿರುವ ಗಂಭೀರ ಸುಧಾರಣೆಗಳ ಫಲವಾಗಿ ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬಂದಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿಯೂ ಶಿಕ್ಷಣ ಮಟ್ಟ ಸುಧಾರಿಸಿದೆ ಎಂದು ಅವರು ಸಮರ್ಥಿಸಿಕೊಂಡರು. ಮಕ್ಕಳಿಗೆ ಕಲೆ, ನಾಟಕ ಹಾಗೂ ಸಾಹಿತ್ಯದ ಅರಿವು ಮೂಡಿಸುವ ಕುರಿತು ಮತ್ತು ಕೆಪಿಎಸ್ ಶಿಕ್ಷಣದ ಕುರಿತು ದೇವನೂರು ಮಹಾದೇವ ಅವರು ಮಹತ್ವದ ಸಲಹೆಗಳನ್ನು ನೀಡಿದ್ದಾರೆ ಎಂದು ಸಚಿವರು ತಿಳಿಸಿದರು. ಎಲ್ಲರೂ ಕನ್ನಡ ಶಾಲೆಗಳತ್ತ ಮುಖ ಮಾಡಬೇಕು ಎಂಬುದು ಸರ್ಕಾರದ ಆಶಯವಾಗಿದೆ ಎಂದು ಅಭಿಪ್ರಾಯಪಟ್ಟರು.

**<><*<><>*><>**

ಆಳಂದ ಮಶಾಕ್ ದರ್ಗಾ ಪ್ರಕರಣದಲ್ಲಿನ ಆರೋಪಿಗಳ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯುವ ಮೂಲಕ ಕಾಂಗ್ರೆಸ್ ಮತ ಬ್ಯಾಂಕ್ ರಾಜಕಾರಣ ಮಾಡಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ರಾಜ್ಯದ ಭದ್ರತೆಗೆ ಅಪಾಯ ತಂದೊಡ್ಡಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಪೆಟ್ರೋಲ್, ಡೀಸೆಲ್‌ನಿಂದ ಸರ್ಕಾರಕ್ಕೆ ಬರುತ್ತಿರುವ ತೆರಿಗೆಯ ಹಣದಲ್ಲಿ ಪೆಟ್ರೋಲ್ ಬೆಲೆ ಕಡಿತ ಮಾಡುವಂತೆ ಆಗ್ರಹಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಅನ್ನದಾತರ ಹಿತಾಸಕ್ತಿ ಕಡೆಗಣಿಸಲು ಅವಕಾಶ ನೀಡುವುದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಹಿಂದೂ ವಿರೋಧಿ ನೀತಿ ಅನುಸರಿಸುತ್ತಿರುವುದರ ವಿರುದ್ಧ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ರಾಜ್ಯಸಭಾ ಅಭ್ಯರ್ಥಿ ಆಯ್ಕೆ ಕುರಿತಂತೆ ಚರ್ಚೆಯಾಗಿದ್ದು, ದೇವೇಗೌಡರನ್ನು ರಾಜ್ಯಸಭೆಗೆ ಕಳುಹಿಸಲು ಬಿಜೆಪಿ ವಿರೋಧಿಸಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ದೇವೇಗೌಡರಿಗೆ ಅವಕಾಶ ನೀಡುವ ನಿರ್ಧಾರ ರಾಷ್ಟ್ರೀಯ ನಾಯಕರದ್ದು ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರ ಜನರ ಒಳಿತಿಗಾಗಿ ಪೆಟ್ರೋಲಿಯಂ ಉತ್ಪನ್ನಗಳ ಮೇಲಿನ ತೆರಿಗೆಯನ್ನು ಕಡಿಮೆ ಮಾಡಲಿ ಎಂದು ಆಗ್ರಹಿಸಿದ್ದಾರೆ.

**<><*<><>*><>**

ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಮಳೆಯಾಗಿದೆ. ಇಂದು ಉತ್ತರಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡು ಜಿಲ್ಲೆಗಳಾದ ಬಾಗಲಕೋಟೆ, ಗದಗ, ಧಾರವಾಡದಲ್ಲೂ ಆಲಿಕಲ್ಲು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಒಳನಾಡು ಜಿಲ್ಲೆಗಳಾದ ಚಿತ್ರದುರ್ಗ, ತುಮಕೂರು, ದಾವಣಗೆರೆಯ ಒಂದು ಅಥವಾ ಎರಡು ಸ್ಥಳಗಳಲ್ಲಿ ಹಗುರದಿಂದ ಮಳೆಯಾಗಲಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು, ಕೆಲವು ಪ್ರದೇಶಗಳಲ್ಲಿ ರಾತ್ರಿ ವೇಳೆ ಗಾಳಿಯೊಂದಿಗೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

**<><*<><>*><>**

ಭಾರತೀಯ ವಾಯುಪಡೆಯ ಪ್ರತಿಷ್ಠಿತ ಸೂರ್ಯಕಿರಣ್ ಏರೋಬ್ಯಾಟಿಕ್ ತಂಡ ಇದೇ ೨೬ರಂದು ತನ್ನ ೩೦ನೇ ವಾರ್ಷಿಕೋತ್ಸವ ಆಚರಿಸಲಿದೆ. ಭಾರತೀಯ ವಾಯುಪಡೆಯ ರಾಯಭಾರಿಗಳು ಎಂದು ಖ್ಯಾತಿ ಹೊಂದಿರುವ ಸೂರ್ಯಕಿರಣ್ ಏರೋಬ್ಯಾಟಿಕ್ ತಂಡ ಬಾನಂಗಳದಲ್ಲಿ ಚಮತ್ಕಾರ ಮೂಡಿಸುವಲ್ಲಿ ಯಶಸ್ವಿಯಾಗಿದೆ.

**<><*<><>*><>**

ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಖಾಲಿ ಇಲ್ಲ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹಾದೇವಪ್ಪ ತಿಳಿಸಿದ್ದಾರೆ. ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ, ಈ ಹಿಂದೆಯೂ ನಡೆಯುತ್ತಿತ್ತು. ಆದರೆ ಬಿಜೆಪಿ ಮಾಡುತ್ತಿರುವ ವಿಧಾನವೇ ಬೇರೆಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕೇಂದ್ರ ಸರ್ಕಾರ ಅಲ್ಪಸಂಖ್ಯಾತರ ಮತದಾನದ ಹಕ್ಕನ್ನು ಕಿತ್ತುಕೊಳ್ಳಲು ಯತ್ನಿಸುತ್ತಿದೆ ಎಂದು ದೂರಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**